ಲಿಖಿತ ಮೂಲಕ ಉತ್ತರಿಸುವ

ಕರ್ನಾಟಕ ವಿಧಾನ ಪರಿಷತ್ತು
ನೂರ ನಲವತ್ತನೆಯ ಅಧಿವೇಶನ
ಬುಧವಾರ, ದಿನಾಂಕ : 11 ನೇ ಮಾರ್ಚ್, 2020

ರಾಜೀವ್‌ಗಾಂಧಿ ಗ್ರಾಮೀಣ ವಸತಿ ನಿಗಮದ ವಸತಿ ಯೋಜನೆ ಕುರಿತು

ಶ್ರೀ ಆರ್. ಧರ್ಮಸೇನ (ಸ್ಥಳೀಯ ಸಂಸ್ಥೆಗಳಿಂದ ಚುನಾಯಿತರಾದವರು) :-

586 (851) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜೀವ್‌ಗಾಂಧಿ ಗ್ರಾಮೀಣ ವಸತಿ ನಿಗಮದ ವತಿಯಿಂದ ಯಾವ ಯಾವ ವಸತಿ ಯೋಜನೆಗಳನ್ನು ಜಾರಿಗೆ ತರಲಾಗುತ್ತಿದೆ;

(ಆ) ಅನುದಾನದ ಕೊರತೆಯಿಂದ ಈ ವಸತಿ ಯೋಜನೆಗಳ ಪ್ರಗತಿ ಕುಂಠಿತವಾಗಿ ಗ್ರಾಮೀಣ ಜನರಿಗೆ ವಸತಿಗಳು ಸಿಗುವುದು ಕಷ್ಟವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಇ) ನೆರೆ ಹಾವಳಿ ಮುಂತಾದ ಪ್ರಕೃತಿ ವಿಕೋಪಗಳಿಂದ ವಸತಿ ಹೀನರಾದವರಿಗೆ ಮತ್ತು ಇತರ ವಸತಿ ಹೀನರಿಗೆ ವಸತಿ ಸೌಕರ್ಯ ಕಲ್ಪಿಸಲು ಸರ್ಕಾರ ತ್ವರಿತಗತಿಯಲ್ಲಿ ಹೆಚ್ಚಿನ ಅನುದಾನ ಒದಗಿಸುವುದೇ?